# ಕರ್ನಾಟಕ ವಿಧಾನ ಪರಿಷತ್

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿ (ಕಿರಿಯ ಪುರುಷ ಆರೋಗ್ಯ ಸಹಾಯಕರು) ಹುದ್ದೆಗಳನ್ನು ದೀರ್ಘ ಕಾಲದಿಂದ ಭರ್ತಿ ಮಾಡದೆ ಇರುವುದರಿಂದ ರೋಗಿಗಳಿಗೆ ಬಹಳ ತೊಂದರೆಯುಂಟಾಗಿರುವ ಗಂಭೀರ ಸಮಸ್ಯೆ ಕುರಿತು ನಿಯಮ–330 ರಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಉತ್ತರ:-

*****

**ಉತ್ತರ:-**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ರಾಜ್ಯಾದ್ಯಂತ 5913 ಆರೋಗ್ಯ ನಿರೀಕ್ಷಣಾಧಿಕಾರಿ (ಕಿರಿಯ ಪುರುಷ ಆರೋಗ್ಯ ಸಹಾಯಕರು) ಹುದ್ದೆಗಳು ಮಂಜೂರಾಗಿದ್ದು, 3221 ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ 2692 ಹುದ್ದೆಗಳು ಖಾಲಿ ಇರುತ್ತದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಹಂತದಲ್ಲಿ ರೋಗಿಗಳಿಗೆ ತೊಂದರೆಯಾಗದಂತೆ ಜಿಲ್ಲೆಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳಿಗೆ ಖಾಲಿ ಹುದ್ದೆಗಳ ಹೆಚ್ಚುವರಿ ಪ್ರಭಾರವನ್ನು ವಹಿಸಿ, ಕಾರ್ಯನಿರ್ವಹಿಸುವಂತೆ ಪರ್ಯಾಯ ವ್ಯವಸ್ಥೆ ಮಾಡಲಾಗಿರುತ್ತದೆ.

ಮುಂದುವರೆದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 2692 ಆರೋಗ್ಯ ನಿರೀಕ್ಷಣಾಧಿಕಾರಿ (ಕಿರಿಯ ಪುರುಷ ಆರೋಗ್ಯ ಸಹಾಯಕರು) ಹುದ್ದೆಗಳನ್ನು (ಉಳಿಕೆ ಮೂಲವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದ ಸೇರಿ) ನೇಮಕ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

**ಸಂಖ್ಯೆ: ಆಕುಕ 488 ಹೆಚ್‌ಎಸ್‌ಎಂ 2022**